ಕಾರ್ಕಳ ನಗರಕ್ಕೆ ಒಳಚರಂಡಿ ವ್ಯವಸ್ಥೆಯನ್ನು ಒದಗಿಸುವುದು.

39 (67) ಶ್ರೀ ಗೋಪಾಲ ಭಂಡಾರಿ. ಹೆಚ್ (ಕಾರ್ಕಳ):– ಮಾನ್ಯ ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಕಾರ್ಕಳ ನಗರದ ಒಳಚರಂಡಿ ವ್ಯವಸ್ಥೆಯನ್ನು ನಿರ್ಮಾಣ ಮಾಡುವ ಬಗ್ಗೆ ಯೋಜನೆಯನ್ನು ರೂಪಿಸಲು ಸರ್ಕಾರವು ಹಣ ಪಾವತಿ ಮಾಡಿದೆಯೇ; ಹಾಗಿದ್ದಲ್ಲಿ, ಎಷ್ಟು ಹಣ ಪಾವತಿ ಮಾಡಲಾಗಿದೆ ಹಾಗೂ ಎಂದು ಪಾವತಿ ಮಾಡಲಾಗಿದೆ;

ಆ) ಈ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಅನುಮೋದನೆಯನ್ನು ಕೊಟ್ಟು ಯಾವಾಗ ಕೆಲಸ ಪ್ರಾರಂಭಿಸಲಾಗುವುದು;

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು):

ಅ) ಸರ್ಕಾರದಿಂದ ಯಾವುದೇ ಹಣ ಪಾವತಿ ಮಾಡಿರುವುದಿಲ್ಲ. ಕಾರ್ಕಳ ಪುರಸಭೆಯು ಕಾರ್ಕಳ ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆಯನ್ನು ಒದಗಿಸುವ ಸಲುವಾಗಿ ಯೋಜನೆಯ ಸರ್ವೆ ಕಾರ್ಯ ಮತ್ತು ಅಂದಾಜು ಪಟ್ಟಿಯನ್ನು (ಯೋಜನೆಯನ್ನು ರೂಪಿಸಲು) ತಯಾರಿಸಲು ಜುಲೈ 2010ರಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ರೂ.10.00 ಲಕ್ಷಗಳ ಮೊತ್ತವನ್ನು ಪಾವತಿ ಮಾಡಿರುತ್ತದೆ.

ಆ) ಕಾರ್ಕಳ ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆಯನ್ನು ಒದಗಿಸಲು ಸಮಗ್ರವಾದ ಸಮೀಕ್ಷೆ ಹಾಗೂ ಸರ್ವೆ ಕಾರ್ಯ ಮಂಡಳಿವತಿಯಿಂದ ಕೈಗೊಂಡು, ವಿವರವಾದ ವಿನ್ಯಾಸ ಹಾಗೂ ಅಂದಾಜು ಪಟ್ಟಿಯನ್ನು ತಯಾರಿಸಿದೆ. ಸದರಿ ಅಂದಾಜು ಪಟ್ಟಿಗೆ ಸ್ಥಳೀಯ ಸಂಸ್ಥೆಯ ಠರಾವು ಪಡೆದು ಮಂಡಳಿಯು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ ನಂತರ ಹಣಕಾಸಿನ ಲಭ್ಯತೆಯ ಮೇರೆಗೆ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಿ ಮಂಡಳಿವತಿಯಿಂದ ಕಾಮಗಾರಿಗಳನ್ನು ಪ್ರಾರಂಭಿಸಲಾಗುತ್ತದೆ.

ಮನೆ ನಿರ್ಮಾಣ ವಿಳಂಬವಾಗಿರುವುದು

40 (68) ಶ್ರೀ ಗೋಪಾಲ ಭಂಡಾರಿ ಹೆಚ್. (ಕಾರ್ಕಳ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈವರೆವಿಗೂ ಯಾವ ಯಾವ ತಾಲ್ಲೂಕಿಗೆ ಎಷ್ಟೆಷ್ಟು ಮನೆಗಳನ್ನು ಯಾವ ಯಾವ ಯೋಜನೆಗಳಡಿಯಲ್ಲಿ ಮಂಜೂರು ಮಾಡಲಾಗುತ್ತದೆ;